ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ ದಿನಾಂಕ : DATE : 31/05/2019

# ಗಣೇಶ ಅಮಾನತು ರದ್ದು

30-5-19

ಸಂ.ಕ. ಸಮಾಚಾರ ಬೆಂಗಳೂರು

ಶಾಸಕರನ್ನು ತಡೆಹಿಡಿಯಲು ಹಲವಾರು ಕಸರತ್ತು ನಡೆಸುತ್ತಿರುವ ಕಾಂಗ್ರೆಸ್ ಇದೀಗ ಕಂಪ್ಲಿ ಶಾಸಕ ಜೆ.ಎನ್. ಗಣೇಶ ಅವರ ಅಮಾನತು ಆದೇಶವನ್ನು ಹಿಂಪಡೆಯಲು ಮುಂದಾಗಿದೆ.



ಕಾಂಗ್ರೆಸ್ ಉಸ್ತುವಾರಿ ಕೆ.ಸಿ. ವೇಣುಗೋಪಾಲ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಕಳೆದ ಜನವರಿ 19 ರಂದು ಈಗಲ್‌ಟನ್ ರೆಸಾರ್ಟ್‌ನಲ್ಲಿ ಹೊಸಪೇಟೆ ಶಾಸಕ ಆನಂದ್‌ಸಿಂಗ್ ಹಾಗೂ ಗಣೇಶ್ ಮಧ್ಯೆ ನಡೆದ ಗಲಾಟೆ ಬಳಿಕ ಶಾಸಕ ಜೆ.ಎನ್. ಗಣೇಶ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕಾಂಗ್ರೆಸ್ ಅಮಾನತು ಮಾಡಲಾಗಿತ್ತು. ನಂತರ ಗಣೇಶ ಬಂಧನವಾಗಿ ಕೆಲವು ದಿನಗಳ ಹಿಂದೆ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದರು.

ಸಮ್ಮಿಶ್ರ ಸರ್ಕಾರವನ್ನು ಉಳಿಸಿಕೊಳ್ಳಲು ಶಾಸಕರನ್ನು ಹಿಡಿದಿಟ್ಟುಕೊಳ್ಳಬೇಕಾದ ಅನಿವಾರ್ಯತೆ ಕಾಂಗ್ರೆಸ್‌ಗೆ ಇರುವುದರಿಂದ ಈ ನಿರ್ಧಾರ ತೆಗೆದುಕೊಂಡಿದೆ.

ಜಾಮೀನಿನ ಮೇಲೆ ಬಿಡುಗಡೆಯಾಗಿ ಬಂದ ನಂತರ ಗಣೇಶ್ ಅವರು ಅತೃಪ್ತರ ಶಾಸಕರ ಜತೆ ಗುರುತಿಸಿಕೊಂಡಿದ್ದರು. ಈಗ ಪಕ್ಷ ಅವರ ಅಮಾನತು ಆದೇಶ ವಾಪಸ್ ಪಡೆದಿದೆ.

> ನಮ್ಮಲ್ಲಿ ಜಗಳವಿಲ್ಲ. ನಾನು ಆನಂದಣ್ಣ(ಶಾಸಕ) ಚೆನ್ನಾಗಿಯೇ ಇದ್ದೆವು. ನಮ್ಮ ಮಧ್ಯೆ ಜಗಳ ಹಚ್ಚಿ ತಾವು ಲಾಭ ಪಡೆದುಕೊಂಡಿದ್ದಾರೆ.
>
> –ಗಣೇಶ್, ಕಂಪ್ಲಿ ಶಾಸಕ

2